ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ.804/2025

ಸಿ.ಡಬ್ಲ್ಯೂ -06
ಪಿ.ಡಬ್ಲ್ಯೂ -05

ಸಾಕ್ಷಿದಾರನ ಹೆಸರು :- ಹರೀಶ್
ತಂದೆಯ ಹೆಸರು :- ಗಂಗಹನುಮಯ್ಯ
ವಯಸ್ಸು :- 27 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ಸಣಬಘಟ್ಟ

**ಸಾಕ್ಷಿಗೆ ದಿಃ 08.05.2026 ರಂದು ಪ್ರಮಾಣ ವಚನ ಬೋದಿಸಲಾಯಿತು.**
**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಸ್ಥಳ ಪಂಚನಾಮೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ.2 ಎಂದು, ಸಹಿಯನ್ನು ನಿ.ಪಿ.2(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎರಡು ವರ್ಷಗಳ ಹಿಂದೆ ಹುಲಿಯೂರುದುರ್ಗ ಪೊಲೀಸ್ ಠಾಣೆಯಲ್ಲಿ ಮಾಡಿದ್ದು ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಆದಿನ ನನ್ನ ಜೊತೆ ಚಾ.ಸಾ.5 ರವರೂ ಸಹ ಇದ್ದರು. ನಕ್ಷೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ.3 ಎಂದು ಸಹಿಯನ್ನು ನಿ.ಪಿ.3(ಸಿ) ಎಂದು ಗುರುತಿಸಲಾಯಿತು. ವಾಹನ ಪರಿಶೀಲನಾ ಪಂಚನಾಮೆಗೆ ನನ್ನ ಸಹಿ ಇರುತ್ತದೆ ಅದನ್ನು ನಿ.ಪಿ.4 ಎಂದು, ಸಹಿಯನ್ನು ನಿ.ಪಿ.4(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಒಂದು ವರ್ಷದ ಹಿಂದೆ ಹುಲಿಯೂರುದುರ್ಗ ಪೊಲೀಸ್ ಠಾಣೆಯಲ್ಲಿ ಮಾಡಿದ್ದು ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುವಾನು ಜಪ್ತು ಮಾಡಿರುವುದಿಲ್ಲ. ನಾನು ಹೋಗುತ್ತಿರುವಾಗ ಪೊಲೀಸರು ನನ್ನನ್ನು ಕರೆದು ಫೋಟೋಗಳನ್ನು ತೆಗೆದುಕೊಂಡಿರುತ್ತಾರೆ. ಆದಿನ ನನ್ನ ಜೊತೆ ಚಾ.ಸಾ.5 ರವರೂ ಸಹ ಇದ್ದರು.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 01.03.2025ರಂದು ಬೆಳಿಗ್ಗೆ 9.30 ರಿಂದ 10.20 ರ ಸಮಯದಲ್ಲಿ ನನ್ನ ಹಾಗೂ ಚಾ.ಸಾ.5 ರವರ ಸಮಕ್ಷಮ ಸ್ಥಳ ಪಂಚನಾಮೆ ಮಾಡಿ ನಕಾಶೆಯನ್ನು ಸಹ ತಯಾರು

ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಬೆಳಿಗ್ಗೆ 10.35 ರಿಂದ 11.20ರವರೆಗೆ ವಾಹನ ಅಮಾನತ್ತು ಪಂಚನಾಮೆಯನ್ನು ಮಾಡಿ ಕಾರ ನಂ ಕೆ.ಎ.05-ಎನ್.ಇ-927ಅನ್ನು ಜಪ್ತು ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿತರ ವಕೀಲರು ಪಾಟೀ ಸವಾಲು ಇಲ್ಲವೆಂದು ನೀವೆದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.